# ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
# KARNATAKA LEGISLATIVE ASSEMBLY, RESEARCH AND REFERENCE BRANCH

## ಪತ್ರಿಕಾ ತುಣುಕುಗಳು
## PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: [illegible]

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ  ದಿನಾಂಕ : DATE 12/9/2020

---

ಸಿದ್ದರಾಮಯ್ಯಗೆ ಶಾಸಕ ಜಮೀರ್ ಮನವರಿಕೆ

# ಶೇಖ್ ಫೈಜಾನ್ ಗೊತ್ತು ಆತನೊಂದಿಗೆ ಸಂಬಂಧವಿಲ್ಲ

■ **ವಿಕ ಸುದ್ದಿಲೋಕ** ಬೆಂಗಳೂರು

ಡ್ರಗ್ಸ್ ಮಾಫಿಯಾದಲ್ಲಿ ತಮ್ಮ ವಿರುದ್ಧ ಕೇಳಿ ಬರುತ್ತಿರುವ ಆರೋಪಗಳು ಸಾಬೀತಾದರೆ



ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡುವುದರ ಜತೆಗೆ ತಮ್ಮ ಆಸ್ತಿಗಳನ್ನು ಸರಕಾರಕ್ಕೆ ಬರೆದುಕೊಡುವುದಾಗಿ ಕಾಂಗ್ರೆಸ್ ಶಾಸಕ ಜಮೀರ್ ಅಹಮದ್ ಖಾನ್ ಸವಾಲು ಹಾಕಿದ್ದಾರೆ.

ವಿಧಾನಸಭೆ ಪ್ರತಿಪಕ್ಷ ನಾಯಕ ಸಿದ್ದರಾಮಯ್ಯ ಅವರನ್ನು ಭೇಟಿಯಾಗಿ ತಮ್ಮ ವಿರುದ್ಧದ ಆರೋಪಗಳಿಗೆ ಸ್ಪಷ್ಟನೆ ನೀಡಿದ ಬಳಿಕ ಸುದ್ದಿಗಾರರ ಜತೆ ಮಾತನಾಡಿದ ಜಮೀರ್ ಅಹಮದ್ ಅವರು, ''ಡ್ರಗ್ಸ್ ಪ್ರಕರಣದಲ್ಲಿ ಬಂಧನಕ್ಕೆ ಒಳಗಾಗಿರುವ ಸಂಜನಾ ಗೊತ್ತು ಇಲ್ಲ; ನೋಡಿಯೂ ಇಲ್ಲ, ಶೇಖ್ ಫೈಜಾನ್ ನನಗೆ ಗೊತ್ತು, ಆದರೆ ಆತನೊಂದಿಗೆ ಯಾವುದೇ ಸಂಬಂಧವಿಲ್ಲ, ನನ್ನನ್ನು ಏಕೆ ಟಾರ್ಗೆಟ್ ಮಾಡುತ್ತಿದ್ದಾರೆ,'' ಗೊತ್ತಿಲ್ಲ ಎಂದರು.

''ಪ್ರಕರಣದಲ್ಲಿ ಅನಗತ್ಯವಾಗಿ ತಮ್ಮ ಹೆಸರು ತಂದಿರುವ ಪ್ರಶಾಂತ ಸಂಬರಗಿ ವಿರುದ್ಧ ದೂರು ಸಲ್ಲಿಸಲಾಗಿದೆ. ರಾಜ್ಯದಲ್ಲಿ ಬಿಜೆಪಿ ಸರಕಾರವೇ ಅಧಿಕಾರದಲ್ಲಿ ಇರುವುದರಿಂದ ತನಿಖೆ ಮಾಡಲಿ, ಯಾವುದೇ ಅಭ್ಯಂತರವಿಲ್ಲ, ಯಾವುದೇ ರೀತಿಯ ತನಿಖೆಗೂ ಸಿದ್ಧನಿದ್ದೇನೆ,'' ಎಂದು ಜಮೀರ್ ಹೇಳಿದರು.

ಇದಕ್ಕೂ ಮುನ್ನ ಸಿದ್ದರಾಮಯ್ಯ ಅವರೊಂದಿಗೆ ನಡೆಸಿದ ಮಾತುಕತೆ ಸಂದರ್ಭದಲ್ಲಿ ಅನಗತ್ಯವಾಗಿ ತಮ್ಮ ವಿರುದ್ಧ ಕೆಲವರು ಆರೋಪ ಮಾಡುತ್ತಿದ್ದಾರೆ, ಇದರಲ್ಲಿ ಯಾವುದೇ ಹುರುಳಿಲ್ಲ ಎಂದು ಮನವರಿಕೆ ಮಾಡಿಕೊಟ್ಟರೆಂದು ತಿಳಿದುಬಂದಿದೆ.

## ಪೊಲೀಸರಿಗೆ ಮುಕ್ತ ಹಸ್ತ ನೀಡಿ ಎಂದ ಸಿದ್ದು

**ಬೆಂಗಳೂರು:** ಮಾದಕ ವಸ್ತುಗಳ ಹಾವಳಿಯ ನಿರ್ಮೂಲನೆಗೆ ಪ್ರಾಮಾಣಿಕ ಉದ್ದೇಶ ಸಿಎಂಗೆ ಇದ್ದರೆ ಬೀದಿಯಲ್ಲಿ ನಿಂತು ಪ್ರತಿಪಕ್ಷ ನಾಯಕರ ಬಗ್ಗೆ ಸುಳ್ಳು ಆರೋಪಗಳನ್ನು



ಮಾಡಿ ತನಿಖೆಯ ಹಾದಿ ತಪ್ಪಿಸುತ್ತಿರುವ ಸಂಪುಟ ಸಚಿವರು ಹಾಗೂ ಪಕ್ಷದ ನಾಯಕರ ಬಾಯಿ ಮುಚ್ಚಿಸಿ ಪೊಲೀಸರಿಗೆ ಮುಕ್ತ ಹಸ್ತ ನೀಡಬೇಕೆಂದು ಪ್ರತಿಪಕ್ಷ ನಾಯಕ ಸಿದ್ದರಾಮಯ್ಯ ಆಗ್ರಹಿಸಿದ್ದಾರೆ. ಈ ಸಂಬಂಧ ಸರಣಿ ಟ್ವೀಟ್ ಮಾಡಿರುವ ಅವರು, ಡ್ರಗ್ಸ್ ಹಗರಣದ ತನಿಖೆಯ ಹಾದಿ ನೋಡಿದರೆ ಬಿಜೆಪಿ ಸರಕಾರಕ್ಕೆ ಅಪರಾಧಿಗಳನ್ನು ಶಿಕ್ಷಿಸುವ ಉದ್ದೇಶಕ್ಕಿಂತಲೂ ಕೊರೊನಾ ಹಾವಳಿ ಮತ್ತು ಅತಿವೃಷ್ಟಿ ಪರಿಹಾರದ ತನ್ನ ವೈಫಲ್ಯಗಳಿಂದ ಜನರ ಮನಸ್ಸನ್ನು ಬೇರೆ ಕಡೆ ಸೆಳೆಯುವ ದುರುದ್ದೇಶ ಇದ್ದಂತೆ ಕಾಣುತ್ತಿದೆ. ಡ್ರಗ್ಸ್ ಹಗರಣದಲ್ಲಿ ಭಾಗಿಯಾಗಿದ್ದರೆನ್ನಲಾದ ತಮ್ಮ ಪಕ್ಷದವರನ್ನು ರಕ್ಷಿಸುವ ಮತ್ತು ಈ ಹಗರಣ ಬಳಸಿಕೊಂಡು ಪ್ರತಿಪಕ್ಷ ನಾಯಕರ ಚಾರಿತ್ರ್ಯಹರಣ ಮಾಡುವ ಪ್ರಯತ್ನ ಮಾಡುತ್ತಿರುವುದು ಖಂಡನೀಯ ಎಂದು ಹೇಳಿದ್ದಾರೆ.